ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು 1 ನೇ ಅಧಿಕ ಜೆಎಂಎಫ್‌ಸಿ ನ್ಯಾಯಾಲಯ
ರಾಣೇಬೆನ್ನೂರು.
ಸಿ.ಸಿ.ಸಂಖ್ಯೆಃ 599/2024

ಪಿ ಡಬ್ಲ್ಯೂಃ 2
ಸಿ ಡಬ್ಲ್ಯೂಃ 2

| | | |
|---|---|---|
| ಸಾಕ್ಷಿಯ ಹೆಸರು | : | ಅರ್ಜುನ್ |
| ತಂದೆಯ ಹೆಸರು | : | ಕೃಷ್ಣಪ್ಪ |
| ವಯಸ್ಸು | : | 35 |
| ಉದ್ಯೋಗ | : | ಕೂಲಿ |
| ವಾಸಸ್ಥಳ | : | ಯಕಲಾಸಪುರ |

ದಿನಾಂಕಃ 25-11-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ**

ಸಾಕ್ಷಿದಾರರಿಗೆ ನಿಪಿ 2 ರ ಗುನ್ಹಾ ಜಾಗದ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿನ ತಮ್ಮ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು **ನಿಪಿ 2 ಬಿ** ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಸದರಿ ಸಹಿಯನ್ನು ನಾನು ಈಗ್ಗೆ 2 ವರ್ಷಗಳ ಹಿಂದೆ ಅಬಕಾರಿ ಕಚೇರಿಯಲ್ಲಿ ಮಾಡಿರುತ್ತೇನೆ. ನಿಪಿ 2 ರಲ್ಲಿ ಬರೆದಿರುವ ವಿಚಾರಗಳ ಬಗ್ಗೆ ನನಗೆ ಗೊತ್ತಿಲ್ಲ. ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

**ಮಾನ್ಯ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**

**ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ**

ದಿನಾಂಕ 06-05-2024 ರಂದು ರಾತ್ರಿ 07-50 ರಿಂದ 08-50 ರ ವರೆಗೆ ನನ್ನ ಹಾಗೂ ಚಾ ಸಾ 3 ರವರ ಸಮಕ್ಷಮ ಗುನ್ಹಾ ಜಾಗದಲ್ಲಿ ನಿಪಿ 2 ರಂತೆ ಆರೋಪಿಯಿಂದ ಮುದ್ದೆ ಮಾಲುಗಳನ್ನು ವಶಪಡಿಸಿಕೊಂಡು ನಮ್ಮ ಸಹಿಗಳನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮ ರಾಸಾಯನಿಕ ಪರೀಕ್ಷೆಗಾಗಿ ಸದರಿ ಮುದ್ದೆ ಮಾಲುಗಳನ್ನು ಪ್ರತ್ಯೇಕಿಸಲಾಗಿರುತ್ತದೆ ಎಂದರೆ ಸರಿಯಲ್ಲ. ಆರೋಪಿಯು ನಮ್ಮ ಊರಿನವರಾದ ಕಾರಣ

ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.



**ಆರೋಪಿ ಪರ ಪಾಟೀ ಸವಾಲು ಇಲ್ಲ.**

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು 1 ನೇ ಅಧಿಕ ಜೆಎಂಎಫ್‌ಸಿ ನ್ಯಾಯಾಲಯ

ರಾಣೇಬೆನ್ನೂರು.

ಸಿ.ಸಿ.ಸಂಖ್ಯೆ: 599/2024

ಪಿ ಡಬ್ಲ್ಯೂ: 3

ಸಿ ಡಬ್ಲ್ಯೂ: 4

| | | |
|---|---|---|
| ಸಾಕ್ಷಿಯ ಹೆಸರು | : | ಸುಧೀರ್ |
| ತಂದೆಯ ಹೆಸರು | : | ಗ್ಯಾಬ್ರಿಯಾಲ್ |
| ವಯಸ್ಸು | : | 32 |
| ಉದ್ಯೋಗ | : | ಅಬಕಾರಿ ಪೇದೆ, ಶಿವಮೊಗ್ಗ ವಲಯ, |
| ವಾಸಸ್ಥಳ | : | ಶಿವಮೊಗ್ಗ |

ದಿನಾಂಕ: 25-11-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋದಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

ದಿನಾಂಕ 22-08-2022 ರಿಂದ 29-07-2025 ರವರೆಗೆ ಪಿರ್ಯಾದಿ ಕಚೇರಿಯಲ್ಲಿ ಅಬಕಾರಿ ಪೇದೆಯಾಗಿ ಕಾರ್ಯನಿರ್ವಹಿಸಿರುತ್ತೇನೆ.

2. ದಿನಾಂಕ 06-05-2024 ರಂದು ಚಾ ಸಾ 1 ರವರೊಂದಿಗೆ ರಾಣೇಬೆನ್ನೂರು ಶಹರದಲ್ಲಿ ಗಸ್ತು ಕೆಲಸದಲ್ಲಿದ್ದಾಗ, ರಾತ್ರಿ 07-10 ರ ಸಮಯಕ್ಕೆ ಚಾ ಸಾ 1 ರವರಿಗೆ ಯಕಲಾಸಪುರ ಗ್ರಾಮದ ಆರೋಪಿಯ ಮನೆಯಲ್ಲಿ ಅಕ್ರಮ ಮಧ್ಯ ಸಂಗ್ರಹಿಸಿ ಮಾರಾಟ ಮಾಡುವ ಬಗ್ಗೆ ಬಾತ್ಮಿ ಬಂದಿದ್ದು, ನಂತರ ನಾನು ಮತ್ತು ಚಾ ಸಾ 4 ರವರು ಯಕಲಾಸಪುರ ಗ್ರಾಮದ ಆಂಜನೇಯ ದೇವಸ್ಥಾನದ ಬಳಿ ಬಂದು ಚಾ ಸಾ 2 ಮತ್ತು 3 ರವರನ್ನು ಪಂಚರನ್ನಾಗಿ ಬರಮಾಡಿಕೊಂಡು, ಸುಮಾರು ರಾತ್ರಿ 07-50 ಕ್ಕೆ ಆರೋಪಿಯ ಮನೆ ಬಳಿ ಬಂದು ಶೋಧನಾ ಸಮುಚಿತ ವಾರಂಟ್ ನ್ನು ತಯಾರಿಸಿ ಪಂಚರ ಸಮಕ್ಷಮ ಆರೋಪಿಯ ಮನೆಯಲ್ಲಿ ದಾಳಿ ಮಾಡಿದ್ದು, ಬೆಡ್ ರೂಮ್ ನ ಮಂಚದ ಕೆಳಗೆ ಒಂದು ಪ್ಲಾಸ್ಟಿಕ್ ಚೀಲ ಇದ್ದು ತೆಗೆದು ಪರಿಶೀಲಿಸಿದಾಗ ಅದರಲ್ಲಿ ಹೈವರ್ಡ್ಸ್ ಚಿಯರ್ಸ ವಿಸ್ಕಿಯ 22 ಟೆಟ್ರಾ ಪ್ಯಾಕೆಟ್ ಗಳು, 90 ಮಿಲಿಯ ಓಸಿ ವಿಸ್ಕಿಯ 64 ಟೆಟ್ರಾ ಪ್ಯಾಕೆಟ್ ಗಳು ಇದ್ದು ಅವುಗಳ ಮೇಲಿನ ಭದ್ರತಾ ಚೀಟಿಯನ್ನು ಹರಿದು ಹಾಕಲಾಗಿತ್ತು.

3. ಆರೋಪಿಯನ್ನು ವಿಚಾರಿಸಲಾಗಿ ಯಾವುದೇ ಪರವಾನಿಗೆ ಇಲ್ಲದ ಕಾರಣ

ಎರಡೂ ಕಂಪನಿಗಳ ತಲಾ 15 ಟೆಟ್ರಾ ಪ್ಯಾಕೆಟ್ ಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಪ್ರತ್ಯೇಕಿಸಿ



ಇಲಾಖಾ ಸೀಲ್ ನಂ.661 ರಂತೆ ಸೀಲ್ ಮಾಡಿ ಪಂಚರ ಸಮಕ್ಷಮ ನಿಪಿ 2 ರಂತೆ ಪಂಚನಾಮೆ ಜರುಗಿಸಿರುತ್ತೇವೆ. ಸದರಿ ಪಂಚನಾಮೆಯನ್ನು ನಾನೇ ಬರೆದಿರುತ್ತೇನೆ. ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 2 ಸಿ ಎಂದು ಗುರುತಿಸಲಾಯಿತು. ನಂತರ ಆರೋಪಿಗೆ ಕಲಂ 41(ಎ) ನೋಟೀಸ್ ನ್ನು ನೀಡಿ ನಂತರ ಕಚೇರಿಗೆ ಮರಳಿರುತ್ತೇವೆ.

3. ದಿನಾಂಕ 15-06-2024 ರಂದು ಈ ಮೇಲಿನ ಕುರಿತಂತೆ ಚಾ ಸಾ 7 ರವರ ಮುಂದೆ ಹೇಳಿಕೆ ನೀಡಿರುತ್ತೇನೆ. ಸಾಕ್ಷಿಯು ಮುದ್ದೆ ಮಾಲುಗಳನ್ನು ಮತ್ತು ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:**

ಸಂಜೆ 07-10 ಕ್ಕೆ ಬಾತ್ಮಿ ಬಂದಿರುವ ಬಗ್ಗೆ ನನ್ನ ಹೇಳಿಕೆಯಲ್ಲಿ ತಿಳಿಸಿರುವುದಿಲ್ಲ ಎಂದರೆ ಸರಿ. ದಾಳಿ ಸಮಯದಲ್ಲಿ ಯಾವುದೇ ಪೋಟೋ ತೆಗೆಯಲು ತೊಂದರೆ ಇರಲಿಲ್ಲ ಎಂದರೆ ಸರಿ. ಚಾ ಸಾ 1 ರವರಿಗೆ ಬಾತ್ಮಿ ಬಂದಿರುವ ವಿಷಯ ಹಾಗೂ ನಾವು ಆರೋಪಿಯ ಮನೆಗೆ ದಾಳಿ ಮಾಡಿರುವ ವಿಷಯ ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ. ಆರೋಪಿಗೂ ಮುದ್ದೆ ಮಾಲಿಗೂ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಲ್ಲ. ನಮ್ಮ ಠಾಣಾ ಅಂಕಿ ಸಂಖ್ಯೆಗೋಸ್ಕರ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ. ನಿಪಿ 2 ನ್ನು ಠಾಣೆಯಲ್ಲಿಯೇ ಕುಳಿತು ತಯಾರಿಸಿರುತ್ತೇವೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.